ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 2-2-2016

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಮೈಸೂರಿನಲ್ಲಿ ಫೆ. 5 : ಸಿನಿಮೋತ್ಸವದ ಪ್ರಶಸ್ತಿ ಪ್ರದಾನ, ಸಮಾರೋಪ ಸಮಾರಂಭ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

8ನೇ ಬೆಂಗಳೂರು ಅಂತರರಾಷ್ಟ್ರೀಯ ತ್ಸವದ ಸಮಾರೋಪ ಸಮಾರಂಭವು ಫೆಬ್ರವರಿ 5 ರಂದು ಸಂಜೆ 5.30 ಗಂಟೆಗೆ ಮೈಸೂರು ಅರಮನೆ ಮುಂಭಾಗದಲ್ಲಿ ನಡೆಯಲಿದೆ. ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯ ಅವರು ಸಿನಿಮೋತ್ಸವದ ಪ್ರಶಸ್ತಿ ಪ್ರದಾನ ಮಾಡುವರು. ಕಂದಾಯ ಸಚಿವ ವಿ. ಶ್ರೀನಿವಾಸ ಪ್ರಸಾದ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ರಾಜ್ಯ ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ, ಹಜ್ ಖಾತೆ ಸಚಿವ ಆರ್. ರೋಷನ್ ಬೇಗ್ ಅವರು ಆಶಯ ಭಾಷಣ ಮಾಡುವರು. ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಸೋಮಶೇಖರ್ ಅವರು ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸುವರು. ರಾಜ್ಯ ಸಚಿವ ಸಂಪುಟ ಸಚಿವರುಗಳು, ಚಲನಚಿತ್ರರಂಗದ ಗಣ್ಯರು, ಸಂಸತ್ ಸದಸ್ಯರು, ಶಾಸಕರುಗಳು, ಮೈಸೂರು ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಮೈಸೂರು ಮಹಾನಗರಪಾಲಿಕೆ ಮಹಾಪೌರರು, ಉಪ ಮಹಾಪೌರರು, ಹಿರಿಯ ಅಧಿಕಾರಿಗಳು ಹಾಗೂ ಗಣ್ಯರು ಸಮಾರೋಪ ಸಮಾರಂಭದಲ್ಲಿ ಪಾಲ್ಗೊಳ್ಳುವರು ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹಾಗೂ ಚಲನಚಿತ್ರೋತ್ಸವ ಸಂಘಟನಾ ಸಮಿತಿಯ ಸದಸ್ಯ ಕಾರ್ಯದರ್ಶಿ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಸಮಾರೋಪ ಸಮಾರಂಭವು ಸಾಂಸ್ಕೃತಿಕ ಕಾರ್ಯಕ್ರಮವನ್ನು ಒಳಗೊಂಡಿರುತ್ತದೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯು ಅಂದು ಕನ್ನಡ ಚಿತ್ರೋದ್ಯಮಕ್ಕೆ ರಜೆ ಘೋಷಣೆ ಮಾಡಿದೆ. ಕನ್ನಡ ಚಿತ್ರರಂಗದ ಖ್ಯಾತ ನಟ/ನಟಿಯರು ಸಾಂಸ್ಕೃತಿಕ ಕಾರ್ಯಕ್ರಮ ನೀಡುವರು ಎಂದು ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಹೆಚ್‌ಬಿಡಿ/ಬಾಬು/ಜಿಪಿಆರ್.

# "ಭಾರತೀಯ ವಾಯುದಳದ" ನೇಮಕಾತಿ ರ್‍ಯಾಲಿ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಭಾರತೀಯ ವಾಯುದಳದಲ್ಲಿ 'Y' ಗುಂಪಿನ ಏರ್‌ಮೆನ್ (ಆಟೋಮೊಬೈಲ್ ಟೆಕ್ನಿಷಿಯನ್, ಗ್ರೌಂಡ್ ಟ್ರೇನಿಂಗ್ ಇನ್‌ಸ್ಟ್ರಕ್ಟರ್,ಐ.ಎ.ಎಫ್ (ಪೋಲೀಸ್) ಮತ್ತು ಮೆಡಿಕಲ್ ಅಸಿಸ್ಟೆಂಟ್) ಹುದ್ದೆಗಳ ಭರ್ತಿಗಾಗಿ ದಿನಾಂಕ : 17-2-2016 ರಂದು ಚಾಮುಂಡಿ ವಿಹಾರ್ ಕ್ರೀಡಾಂಗಣ, ನಜರಬಾದ್, ಮೈಸೂರು ಇಲ್ಲಿ ನೇರ ನೇಮಕಕ್ಕಾಗಿ ರ್‍ಯಾಲಿ ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯದ ಅವಿವಾಹಿತ ಪುರುಷ ಅಭ್ಯರ್ಥಿಗಳು ಮಾತ್ರ ರ್‍ಯಾಲಿಯಲ್ಲಿ ಭಾಗವಹಿಸಲು ಅರ್ಹರು. ಅಭ್ಯರ್ಥಿಗಳು ದಿನಾಂಕ: 1-8-1996 ರಿಂದ 30-11-1999 ರ ಅವಧಿಯಲ್ಲಿ ಜನಿಸಿದವರಾಗಿರಬೇಕು.

ವಿದ್ಯಾರ್ಹತೆ:

'Y' ಗುಂಪಿನ ಆಟೋಮೊಬೈಲ್ ಟೆಕ್ನಿಷಿಯನ್, ಗ್ರೌಂಡ್ ಟ್ರೇನಿಂಗ್ ಇನ್‌ಸ್ಟ್ರಕ್ಟರ್, ಐ.ಐ.ಎಫ್ (ಪೋಲೀಸ್) ಹುದ್ದೆಗಳಿಗೆ ಯಾವುದೇ ವಿಷಯಗಳಲ್ಲಿ 10 + 2 ಅಥವಾ ದ್ವಿತೀಯ ಪಿ.ಯು.ಸಿ.ಯಲ್ಲಿ ಸರಾಸರಿ ಕನಿಷ್ಠ ಶೇ 50 ಅಂಕ ಪಡೆದು ತೇರ್ಗಡೆ ಹೊಂದಿರಬೇಕು ಮತ್ತು ಆಂಗ್ಲ ಭಾಷೆಯಲ್ಲಿ ಶೇ 50 ಅಂಕ ಪಡೆದಿರಬೇಕು. ಅಥವಾ ಸಿ.ಬಿ.ಎಸ್.ಇ/ರಾಜ್ಯ ಶಿಕ್ಷಣ ಮಂಡಳಿ /ಪರಿಷತ್‌ನಿಂದ ಅಂಗೀಕೃತವಾದ ಹಾಗೂ ಅಸೋಸಿಯೇಷನ್ ಆಫ್ ಇಂಡಿಯನ್ ಯುನಿವರ್ಸಿಟೀಸ್‌ನಿಂದ 10+2 ಕ್ಕೆ ತತ್ಸಮಾನ ಎಂದು ಪರಿಗಣಿಸಲ್ಪಟ್ಟಿರುವ ಎರಡು ವರ್ಷಗಳ ವೃತ್ತಿಪರ ಶಿಕ್ಷಣದಲ್ಲಿ ಸರಾಸರಿ ಶೇ 50 ಅಂಕಗಳಿಸಿ ತೇರ್ಗಡೆ ಹೊಂದಿರಬೇಕು ಮತ್ತು ಆಂಗ್ಲ ಭಾಷೆಯಲ್ಲಿ ಶೇ 50 ಅಂಕ ಗಳಿಸಿರಬೇಕು. ವೃತ್ತಿಪರ ಶಿಕ್ಷಣದಲ್ಲಿ ಇಂಗ್ಲೀಷ್ ಭಾಷೆ ಇಲ್ಲದಿದ್ದಲ್ಲಿ ಇಂಡರ್‌ಮೀಡಿಯೆಟ್/ ಮೆಟ್ರಿಕುಲೇಷನ್‌ನ ಇಂಗ್ಲೀಷ್ ವಿಷಯದಲ್ಲಿ ಶೇ 50 ಅಂಕ ಗಳಿಸಿರಬೇಕು.

'Y' ಗುಂಪಿನ ಮೆಡಿಕಲ್ ಅಸಿಸ್ಟೆಂಟ್ ಹುದ್ದೆಗಳೀಗೆ 10+2 ಅಥವಾ ದ್ವಿತೀಯ ಪಿ.ಯು.ಸಿ. ಯಲ್ಲಿ ಭೌತಶಾಸ್ತ್ರ, ರಸಾಯನ ಶಾಸ್ತ್ರ, ಜೀವಶಾಸ್ತ್ರ ಮತ್ತು ಆಂಗ್ಲ ಭಾಷೆ ವಿಷಯಗಳನ್ನು ಹೊಂದಿದ್ದು, ಸರಾಸರಿ ಶೇ 50 ಅಂಕ ಪಡೆದು ತೇರ್ಗಡೆ ಹೊಂದಿರಬೇಕು ಮತ್ತು ಆಂಗ್ಲ ಭಾಷೆಯಲ್ಲಿ ಶೇ 50 ಅಂಕ ಪಡೆದಿರಬೇಕು.

ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಯ ಮೂಲ ಅಂಕ ಪಟ್ಟಿಗಳು, ಎಲ್ಲಾ ದಾಖಲೆಗಳ ಸ್ವಯಂ ದೃಢೀಕೃತ 4 ಸೆಟ್ ಜೆರಾಕ್ಸ್ ಪ್ರತಿಗಳು ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ 7 ಭಾವಚಿತ್ರಗಳೊಂದಿಗೆ ದಿನಾಂಕ: 17-2-2016 ರಂದು ಬೆಳಿಗ್ಗೆ ಚಾಮುಂಡಿ ವಿಹಾರ ಕ್ರೀಡಾಂಗಣ, ನಜಿರಬಾದ್, ಮೈಸೂರು ಇಲ್ಲಿ ಹಾಜರಾಗುವುದು. ಅರ್ಹತಾ ನಿಬಂಧನೆಗಳು, ವೈದ್ಯಕೀಯ ವಾಯುದಳದ ವೆಬ್‌ಸೈಟ್ **www/airmenselection.gov.in** ಗೆ ಭೇಟಿ ನೀಡಿ ಅಥವಾ,

**7 Airmen Selection Centre, No. 1, Cubbon Road, Bangalore – 560 001**

**ಈ ಕಚೇರಿಯನ್ನು ದೂರವಾಣಿ ಸಂಖ್ಯೆ 080–25592100, ಇ–ಮೇಲ್ ವಿಳಾಸ ಮೂಲಕ ಸಂಪರ್ಕಿಸಿ ಅಭ್ಯರ್ಥಿಗಳು ಹತ್ತಿರದ ಉದ್ಯೋಗ ವಿನಿಯಮ ಕೇಂದ್ರವನ್ನು ಸಹ ಸಂಪರ್ಕಿಸಿ ವಿವರಗಳನ್ನು ಪಡೆಯಬಹುದು.**
**ಬಾಬು:ಜಿಪಿಆರ್.**

## ಫಲಿತಾಂಶ ಪ್ರಕಟ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಡಿಸೆಂಬರ್–2015ರ ಮಾಹೆಯಲ್ಲಿ ನಡೆಸಿದ ಪ್ರಥಮ, ಮತ್ತು ದ್ವಿತಿಯ ಡಿ.ಇಡಿ ಪೂರಕ ಪರೀಕ್ಷೆಗಳ ಫಲಿತಾಂಶ ಪಟ್ಟಿಯನ್ನು ರಾಜ್ಯದ ಎಲ್ಲಾ ಡಯಟ್‌ಗಳಿಗೆ ಕಳುಹಿಸಲಾಗಿದೆ. ಸಂಬಂಧಿಸಿದ ಡಿ.ಇಡಿ ಸಂಸ್ಥೆಗಳ ಪ್ರಾಂಶುಪಾಲರುಗಳು ಫಲಿತಾಂಶ ಪಟ್ಟಿಯನ್ನು ಆಯಾ ಡಯಟ್‌ಗಳಿಂದ ಪಡೆದು ದಿನಾಂಕ:04.02.2016ರಂದು ಮದ್ಯಾಹ್ನ: 2.00ಘಂಟೆಗೆ ಫಲಿತಾಂಶವನ್ನು ಆಯಾ ಸಂಸ್ಥೆಗಳಲ್ಲಿ ಪ್ರಕಟಿಸಲು ನಿರ್ದೇಶಕರು (ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

# Results Announced

Bengaluru, February 2 (Karnataka Information)

Results of I & II year D.EdSupplementary Examination conducted by Karnataka Secondary Education Examination Board, Bangalore during December-2015, are sent to all the DIET's in the state. Concerned principals of D.Ed institutions are informed to collect the results from concerned DIET's and to announce the results on 04.02.2016 at 2.00pm in the respective institutes as per the statement of Director (Other Exams), Karnataka Secondary Education Examination Board,Bangalore.

babu:gpr

## 2014 ನೇ ಸಾಲಿನ ಪುಸ್ತಕ ಬಹುಮಾನಕ್ಕೆ ಲೇಖಕರಿಂದ ಅರ್ಜಿ ಆಹ್ವಾನ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಯಕ್ಷಗಾನ (ತೆಂಕು, ಬಡಗು ಮತ್ತು ಘಟ್ಟದಕೋರೆ), ಬಯಲಾಟ (ಮೂಡಲಪಾಯ, ಯಕ್ಷಗಾನ ಸೂತ್ರದ ಗೊಂಬೆಯಾಟ ಮತ್ತು ತೊಗಲುಬೊಂಬೆಯಾಟ, ಶ್ರೀಕೃಷ್ಣಪಾರಿಜಾತ, ಸಣ್ಣಾಟ, ದೊಡ್ಡಾಟ) ಇತ್ಯಾದಿ ಕಲಾಪ್ರಕಾರಗಳಲ್ಲಿ 2014ನೇ ಸಾಲಿನ ಕ್ಯಾಲೆಂಡರ್ ವರ್ಷದಲ್ಲಿ (ಜನವರಿಯಿಂದ ಡಿಸೆಂಬರ್ ಒಳಗೆ) ಪ್ರಕಟಿಸಿರುವ ಪುಸ್ತಕಗಳನ್ನು ಬಹುಮಾನಕ್ಕೆ ಆಯ್ಕೆ ಮಾಡಲು ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯು ಲೇಖಕರಿಂದ ಅರ್ಜಿ ಆಹ್ವಾನಿಸಿದೆ.

ಆಯ್ಕೆಯಾದ ಪುಸ್ತಕಕ್ಕೆ ರೂ 5,000/- ಬಹುಮಾನವನ್ನು ನೀಡಲಾಗುವುದು. ಯಕ್ಷಗಾನ ಮತ್ತು ಬಯಲಾಟದ ವಿವಿಧ ಆಯಾಮಗಳ ಬಗ್ಗೆ (ಸಂಗೀತ, ಆಹಾರ್ಯ, ಅಭಿನಯ ಇತ್ಯಾದಿ) ಸಂಶೋಧನೆ, ವಿಮರ್ಶೆ, ಜೀವನಚರಿತ್ರೆ, ಪ್ರಸಂಗ ಪುಸ್ತಕ ಇತ್ಯಾದಿ ಪ್ರಕಾರಗಳನ್ನು ಒಳಗೊಂಡ ಪುಸ್ತಕಗಳನ್ನು ಬಹುಮಾನಕ್ಕಾಗಿ ಆಹ್ವಾನಿಸಿದೆ. ಪುಸ್ತಕ ಬಹುಮಾನಕ್ಕೆ ಸಲ್ಲಿಸುವ ಪುಸ್ತಕವನ್ನು ಪಠ್ಯಕ್ಕಾಗಿ ಸಿದ್ಧಪಡಿಸಿರಬಾರದು. ಸಂಪಾದಿತ, ಅಭಿನಂದನ ಕೃತಿಯಾಗಿರಬಾರದು, ಸ್ವರಚಿತವಾಗಿರಬೇಕು. ಪ್ರಥಮ ಮುದ್ರಣ ಅವೃತ್ತಿಯಾಗಿರಬೇಕು.

ಬಹುಮಾನಕ್ಕೆ ಪುಸ್ತಕಗಳನ್ನು ಕಳುಹಿಸುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ. ರಸ್ತೆ, ಬೆಂಗಳೂರು – 560 002, ಇವರಿಗೆ 2016 ರ ಫೆಬ್ರವರಿ 20 ರೊಳಗೆ ಅರ್ಜಿಯೊಂದಿಗೆ ಪುಸ್ತಕದ ನಾಲ್ಕು ಪ್ರತಿಗಳನ್ನು ಕಡ್ಡಾಯವಾಗಿ ಕಳುಹಿಸುವುದು. ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ. ಹೆಚ್ಚಿನ ವಿವರಗಳನ್ನು ಹಾಗೂ ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಅಕಾಡೆಮಿಯಿಂದ (ದೂ 080–22113146) ಪಡೆಯಬಹುದು.

ಬಾಬು:ಜಿಪಿಆರ್.

## ಯಕ್ಷಗಾನ/ಬಯಲಾಟದ ಅಪ್ರಕಟಿತ ಪ್ರಸಂಗಗಳ ಸಂಗ್ರಹ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಯಕ್ಷಗಾನ (ತೆಂಕು, ಬಡಗು) ಬಯಲಾಟ (ಮೂಡಲಪಾಯ, ಯಕ್ಷಗಾನ ಸೂತ್ರದ ಗೊಂಬೆಯಾಟ ಮತ್ತು ತೊಗಲುಬೊಂಬೆಯಾಟ, ಶ್ರೀಕೃಷ್ಣಪಾರಿಜಾತ, ಸಣ್ಣಾಟ, ದೊಡ್ಡಾಟ ಇತ್ಯಾದಿ ಕಲಾಪ್ರಕಾರಗಳ ಪ್ರಸಂಗಗಳ ಅಪ್ರಕಟಿತ ಹಸ್ತಪ್ರತಿಗಳನ್ನು ಪ್ರಕಟಿಸುವ ಯೋಜನೆಯೊಂದನ್ನು ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯು ಹಮ್ಮಿಕೊಂಡಿದೆ.

ಪ್ರಸಂಗಗಳ ಹಸ್ತಪ್ರತಿಗಳನ್ನು ಕಳುಹಿಸುವವರು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ. ರಸ್ತೆ, ಬೆಂಗಳೂರು – 560 002, ಈ ವಿಳಾಸಕ್ಕೆ 10-03-2016 ರೊಳಗೆ ಕಳುಹಿಸಿಕೊಡಬೇಕಾಗಿ ಕೋರಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 080–22113146 ನ್ನು ಸಂಪರ್ಕಿಸಬಹುದು.

ಬಾಬು:ಜಿಪಿಆರ್.

## ಬ್ಯೂಟಿಷಿಯನ್ ಕೋರ್ಸ್ ತರಬೇತಿ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಯುವತಿಯರಿಗಾಗಿ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ "ಬ್ಯೂಟಿಷಿಯನ್ ಕೋರ್ಸ್" ತರಬೇತಿ ಶಿಬಿರವನ್ನು

ದಿನಾಂಕ: 12–02–2016 ರಿಂದ 24–02–2016 ರವರೆಗೆ ಬೆಂಗಳೂರಿನ ನೃಪತುಂಗ ರಸ್ತೆಯಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಜ್ಯ ಯುವ ಕೇಂದ್ರದಲ್ಲಿ ಏರ್ಪಡಿಸಲಾಗಿದೆ.

ಆಸಕ್ತ ಯುವತಿಯರು ತಮ್ಮ ಜನ್ಮ ದಿನಾಂಕದ ದಾಖಲೆಯೊಂದಿಗೆ (ಎಸ್.ಎಸ್.ಎಲ್.ಸಿ. ಅಂಕಪಟ್ಟಿ) ಈ ಕೆಳಕಂಡ ವೆಬ್‌ಸೈಟ್‌ನಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು. **www.karnatakayouthportal.in** ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 080– 22214911 ಕಚೇರಿ ವೇಳೆಯಲ್ಲಿ ಸಂಪರ್ಕಿಸುವುದು.

ಬಾಬು:ಜಿಪಿಆರ್.

# ಫಲಿತಾಂಶ

ಬೆಂಗಳೂರು, ಫೆಬ್ರವರಿ 2 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ಡಿಸೆಂಬರ್ 2015 ರ ಮಾಹೆಯಲ್ಲಿ ನಡೆಸಿದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ 3–2–2016 ರಂದು ಮಂಡಳಿಯ ವೆಬ್‌ಸೈಟ್ **www.kseeb.kar.nic.in** ನಲ್ಲಿ ಪ್ರಕಟಿಸಲಾಗುವುದು.

ವಿದ್ಯಾರ್ಥಿಗಳು ವೆಬ್‌ಸೈಟ್‌ನಲ್ಲಿ ಫಲಿತಾಂಶವನ್ನು ಪಡೆಯಬಹುದಾಗಿದೆ. ಶಾಲಾವಾರು ಫಲಿತಾಂಶ ಪಟ್ಟಿಯನ್ನು ಈಗಾಗಲೇ ಶೀಘ್ರ ಅಂಚೆ ಮೂಲಕ ಸಂಬಂಧಿಸಿದ ಸಂಸ್ಥೆಗಳಿಗೆ ಕಳುಹಿಸಲಾಗಿದೆ. ದಿನಾಂಕ 4–2–2016 ರಂದು2–00 ಗಂಟೆಗೆ ರಾಜ್ಯದ ಎಲ್ಲಾ ಗಣಕಯಂತ್ರ ಶಿಕ್ಷಣ ಸಂಸ್ಥೆಗಳಲ್ಲಿ ಪ್ರಕಟಿಸುವಂತೆ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಬಾಬು:ಜಿಪಿಆರ್.

## REPUBLIC DAY CAMP CONTINGENT OF NCC CADETS FROM KARNATAKA & GOA HOSTED AT RAJ BHAWAN ON 02 FEB 2016

The NCC cadets of Karnataka & Goa who participated in the Republic Day Camp at Delhi from 01 Jan to 20 Jan 2016 were given a warm welcome in form a “AT HOME” function at the Raj Bhawan, Bangalore by His Excellency Shri Vajubhai Vala, Governor of Karnataka earlier in the day. The Republic Day Camp contingent had the honour to be photographed and had tea with the Governor of Karnataka.

The NCC Cadets presented a Patriotic Group Song in kannada which says that we the Youth of Karnataka are the future torch bearers of the Nation and also presented the ballet depicting the rich culture of our Nation and the prevalent old tradition of “Atithi Devo Bhava”.

The Governor complimented the cadets for the excellent performance at the Republic Day Camp at Delhi inspite of extreme cold weather conditions. He emphasized upon the drive, sense of sacrifice and patriotism that needs to be inculcated in each cadet to safeguard for our Nation. During the interaction with

the cadets he encouraged them to continue the good work and become good citizens and work towards building India as the greatest Nation of the world.

**ACHIEVEMENTS OF REPUBLIC DAY CONTINGENT(RDC)-2016 OF NCC DIRECTORATE KARNATAKA & GOA IN VARIOUS COMPENTETION HELD DURING REPUBLIC DAY CAMP AT NEW DELHI.**

THE EVENTS/ COMPETITIONS AND WINNING POSITIONS IS GIVEN BELOW:

| SL NO | EVENTS/COMPETEIONS | | POSITIONS |
|---|---|---|---|
| | **GROUP EVENTS** | | |
| 1 | PRIME MINISTER BANNER | | RUNNERS-UP |
| 2 | FLAG AREA COMPETITION (#) | | FIRST |
| 3 | BEST CADET (OVER ALL) | | FIRST |
| 4 | BEST CONTINGENTSENIOR WING(GIRLS) | | FIRST |
| 5 | GROUP DANCE (OVER ALL) | | SECOND |
| | | | |
| | **INDIVIDUAL EVENTS** | **NAME OF CADET** | |
| 1 | BEST CADET SENIOR DIVISION(BOYS) | ADITYA SP | FIRST |
| 2 | BEST CADET JUNIOR DIVISION(BOYS) | NINAD HALGEKAR | FIRST |
| 3 | BEST CADET JUNIOR WING(GIRLS) | DARSHANA KATARIA | SECOND |

**# NOTE**: FLAG AREA COMPETITION INVOLVES MAKING OF GROUND MODEL MADE UP OF MARBLE CHIPS WITH COLOURFUL DECORATION DEPICTING DEVELOPMENT PLANS OF KARNATAKA & GOA AND EXPLAINED BY THE BEST CADET TO THE PRIME MINISTER,DEFENCE MINISTER AND OTHER DISTINGUISHED DIGNITARIES OF INDIA AS WELL AS FORGIEN DIGNITARIES DURING THEIR VISITS.